## ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಿಹರ

## ಸಿ ಸಿ ನಂ. 739/2023

| | | |
|---|---|---|
| ಹೆಸರು | ವೆಂಕಟೇಶ | PW -2 |
| ತಂದೆ ಹೆಸರು | ತಿಮ್ಮಪ್ಪ | CW -2 |
| ವಯಸ್ಸು | 55 ವರ್ಷ | |
| ಉದ್ಯೋಗ | ವ್ಯವಸಾಯ | ದಿನಾಂಕಃ 24.10.2024 |
| ವಾಸ | ಗೆಳ್ಲಹಟ್ಟಿ ಗ್ರಾಮ | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ ಸಸಅ ರವರಿಂದ ಃ**

ಚಾಸಾ 3 ರವರ ಪರಿಚಯ ಇಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದು ಸ್ಥಳ ಮತ್ತು ಅಮಾನತ್ತು ಪಂಚನಾಮೆ ಆಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುತ್ತಾರೆ. ಸದರಿ ದಾಖಲೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಗಳನ್ನು ನಿಪಿ 2(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು ಒಂದೂವರೆ ವರ್ಷದ ಹಿಂದೆ ಮಾಡಿರುತ್ತೇನೆ, ಎಲ್ಲಿ ಎಂದು ನನಗೆ ನೆನಪಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ಎರಡು ಛಾಯಾಚಿತ್ರಗಳನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತಾನು ಇರುವುದನ್ನು ಗುರುತಿಸುತ್ತಾರೆ. ಸದರಿ ಛಾಯಾಚಿತ್ರಗಳನ್ನು ನಿಪಿ 3 ಮತ್ತು 4 ಎಂದು ಗುರುತಿಸಲಾಯಿತು. ನಿಪಿ 3 ಮತ್ತು 4 ನ್ನು ಪೊಲೀಸರು ತೆಗೆದಿರುತ್ತಾರೆ. ಯಾವ ಕಾರಣಕ್ಕಾಗಿ ತೆಗೆಯಲಾಯಿತು ಎಂದು ನನಗೆ ಗೊತ್ತಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎ.ಪಿ.ಪಿ ಯವರು ಕೋರಿದ್ದು, ಸಂಗತಿಗಳನ್ನು ಪರೀಶಿಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟಿ ಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲು ಶ್ರೀ ಎ.ಪಿ.ಪಿ. ಯವರಿಂದಃ**

ದಿನಾಂಕ 11.02.2023 ರಂದು ಹರಿಹರ ಗ್ರಾಮಾಂತರ ಠಾಣಾ ವ್ಯಾಪ್ತಿಯ ಮಿಟ್ಲಕಟ್ಟೆ ಗ್ರಾಮದ ಆಕಾಶ ರೈಸ್ ಇಂಡಸ್ಟ್ರೀಜ ನಲ್ಲಿ ಮಿಲ್ ಹಿಂದಿನ ಬೈಲರ್ ಪಕ್ಕದಲ್ಲಿರುವ ಕಿಟಕಿಯ ಹತ್ತಿರ ಪೊಲೀಸರು ನನ್ನನ್ನು ಮತ್ತು ಚಾಸಾ 3 ರವರನ್ನು ಬರಮಾಡಿಕೊಂಡು ಪ್ರಕರಣದ ವಿದ್ಯಮಾನ ತಿಳಿಸಿ, ಪಂಚರಾಗಲು ಕೇಳಿದ ಮೇರೆಗೆ ನಾವುಗಳ ಒಪ್ಪಿ, ದಿನಾಂಕ 07.02.2023 ರಂದು ಆಕಾಶ ರೈಸ್ ಮಿಲ್ ನಲ್ಲಿ ಮಧ್ಯಾಹ್ನ 2.00 ಗಂಟೆಗೆ ಸಂದೀಪನು ನೀರು ಬಿಡಲು ವಾಲ್ ಆನ್ ಮಾಡಲು ಹೋದಾಗ ವಾಲ ಕಿಟಕಿ ಹತ್ತಿರ ಇದ್ದು, ಕಿಟಕಿಯನ್ನು ಮುಟ್ಟಿ ವಾಲ್ ಆನ್ ಮಾಡಿದಾಗ ಸಂದೀಪನಿಗೆ ವಿದ್ಯುತ್ ಶಕ್ತಿಯ ಶಾಕ್ ತಗಲಿದ್ದರಿಂದ ಸಂದೀಪನು ಮೃತಪಟ್ಟಿರುತ್ತಾನೆ ಎಂದು ನಿಪಿ 2 ರಂತೆ ಪೊಲೀಸರು ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಪಂಚನಾಮೆ ಜರುಗಿಸಿ ನಿಪಿ 3 ಮತ್ತು 4 ರಂತೆ ಛಾಯಾಚಿತ್ರಗಳನ್ನು ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಬೆಳಿಗ್ಗೆ 10.15 ರಿಂದ 11.00 ಗಂಟೆವರೆಗೆ ಜರುಗಿಸಲಾಗಿರುತ್ತದೆ ಎಂದರೆ ಸರಿಯಲ್ಲ. ಪ್ರಕರಣಕ ಎಲ್ಲಾ ವಿಚಾರ ಗೊತ್ತಿದ್ದರೂ ಸಹ

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರುವಿಚಾರಣೆ ಇಲ್ಲಃ**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಿದೆ)

ಓ ಹೇ ಕೇ ಸರಿ ಇದೆ

Sd/-

ಸಿ/ಸಿ ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಮ್‌ಎಫ್ ಸಿ ನ್ಯಾಯಾಲಯ, ಹರಿಹರ.